# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1036(1288)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಶಶಿಲ್ ಜಿ. ನಮೋಶಿ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಅರಣ್ಯ ಇಲಾಖೆಯಲ್ಲಿ 371 J ಅಡಿಯಲ್ಲಿ ನಿಯಮಬಾಹಿರ ಬಡ್ತಿ

(ಅ) ಸೇವೆಯಲ್ಲಿರುವ ನೌಕರರು ಸ್ಥಳೀಯ ವೃಂದ ಸೇರಲು ನಿಯಮಾನುಸಾರ ನೀಡಬೇಕಾದ ದಾಖಲೆಗಳು ಯಾವುವು; ಹಾಗೂ ಅರಣ್ಯ ಇಲಾಖೆಯಲ್ಲಿ ಸುಳ್ಳು ದಾಖಲೆ ನೀಡಿ ಸ್ಥಳೀಯ ವೃಂದ ಸೇರಿರುವ ಬಗ್ಗೆ ದೂರುಗಳು ಬಂದಿದೆಯೇ; ದೂರುಗಳು ಬಂದಿದ್ದರೆ, ಯಾವ ಯಾವ ಹಂತದಲ್ಲಿದೆ;

(ಆ) ಅರಣ್ಯ ಇಲಾಖೆಯಲ್ಲಿ 371 J ಅಡಿಯಲ್ಲಿ ಅನುಬಂಧ – B ಯಲ್ಲಿ ವಾಸಸ್ಥಳ ಪ್ರಮಾಣಪತ್ರ ನೀಡಿ ಸ್ಥಳೀಯ ವೃಂದಕ್ಕೆ ಸ್ಥಳೀಯರಲ್ಲದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಸೇರಿ ಬಡ್ತಿ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಸುಳ್ಳು ದಾಖಲೆ ನೀಡಿ ಸರ್ಕಾರಿ ಸೇವೆಯಲ್ಲಿ ಬಡ್ತಿ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದ್ದರೂ ಕ್ರಮ ಕೈಗೊಳ್ಳದಿರುವುದಕ್ಕೆ ಕಾರಣಗಳೇನು?